# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1106
ಉತ್ತರಿಸಬೇಕಾದ ದಿನಾಂಕ : 21.08.2025
ಸದಸ್ಯರ ಹೆಸರು : ಡಾ.ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ)
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಳೆದ 2 ವರ್ಷಗಳಲ್ಲಿ ರಾಷ್ಟ್ರಮಟ್ಟ ಮತ್ತು ಅಂತಾರಾಷ್ಟ್ರೀಯ ಮಟ್ಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳ ಸಂಖ್ಯೆ ಎಷ್ಟು; ಇವರುಗಳು ಯಾವ ಯಾವ ಕ್ರೀಡೆಯಲ್ಲಿ ಆಯ್ಕೆಯಾಗಿದ್ದಾರೆ. | ಕಲ್ಯಾಣ-ಕರ್ನಾಟಕ ಭಾಗದಿಂದ 2023-24ನೇ ಸಾಲಿನಲ್ಲಿ ರಾಷ್ಟ್ರ ಮಟ್ಟದಲ್ಲಿ 81 ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಒಬ್ಬ ಕ್ರೀಡಾಪಟು ಮತ್ತು 2024-25ನೇ ಸಾಲಿನಲ್ಲಿ ರಾಷ್ಟ್ರ ಮಟ್ಟದಲ್ಲಿ 62 ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಇಬ್ಬರು ಕ್ರೀಡಾಪಟುಗಳು ಅಧಿಕೃತ ಕ್ರೀಡಾಕೂಟಗಳಲ್ಲಿ ಭಾಗವಹಿಸಿರುತ್ತಾರೆ. ಕ್ರೀಡಾವಾರು ವಿವರ ಕೆಳಕಂಡಂತಿದೆ. |

| ಕ್ರ.ಸ | ಕ್ರೀಡೆ | 2023-24 | | 2024-25 | |
|---|---|---|---|---|---|
| | | ರಾಷ್ಟ್ರ ಮಟ್ಟ | ಅಂತಾ ರಾಷ್ಟ್ರೀಯ ಮಟ್ಟ | ರಾಷ್ಟ್ರ ಮಟ್ಟ | ಅಂತಾ ರಾಷ್ಟ್ರೀಯ ಮಟ್ಟ |
| 1 | ಅಥ್ಲೆಟಿಕ್ಸ್ | 38 | - | 35 | - |
| 2 | ಹಾಕಿ | 10 | - | 12 | - |
| 3 | ವಾಲಿಬಾಲ್ | 05 | - | 09 | 01 |
| 4 | ಫುಟ್ಬಾಲ್ | - | - | 02 | - |
| 5 | ಖೋ-ಖೋ | 05 | - | - | 01 |
| 6 | ಟೇಬಲ್ ಟೆನ್ನಿಸ್ | 02 | - | 02 | - |
| 7 | ಹ್ಯಾಂಡ್‌ಬಾಲ್ | 15 | - | - | - |
| 8 | ಕ್ರಿಕೆಟ್ | 02 | - | 02 | - |
| 9 | ಕರಾಟೆ | 04 | - | - | - |
| 10 | ಪ್ಯಾರಾ ಬ್ಯಾಡ್ಮಿಂಟನ್ | - | 01 | - | - |
| | **ಒಟ್ಟು** | **81** | **01** | **62** | **02** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ | ಕ್ರೀಡಾಪಟುಗಳ ಉತ್ತೇಜನದ ದೃಷ್ಟಿಯಿಂದ ಸರ್ಕಾರ ಯಾವ ಯಾವ ಕಾರ್ಯಕ್ರಮ ಹಾಗೂ ಯೋಜನೆಗಳನ್ನು ರೂಪಿಸಿಕೊಂಡಿದೆ? | ರಾಜ್ಯದ ಕ್ರೀಡಾಪಟುಗಳ ಉತ್ತೇಜನದ ದೃಷ್ಟಿಯಿಂದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಹಮ್ಮಿಕೊಂಡಿರುವ ಪ್ರಮುಖ ಯೋಜನೆಗಳ ವಿವರಗಳನ್ನು **ಅನುಬಂಧ** ದಲ್ಲಿ ನೀಡಲಾಗಿದೆ. |

ವೈಎಸ್‌ಡಿ-ಸಿಡಿಎನ್/335/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ

**ಅನುಬಂಧ**

**ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಕ್ರೀಡಾಪಟುಗಳ ಉತ್ತೇಜನದ ದೃಷ್ಟಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಪ್ರಮುಖ ಕಾರ್ಯಕ್ರಮಗಳು**

1. **ಕ್ರೀಡಾ ವಸತಿ ಶಾಲೆ/ನಿಲಯ:** ರಾಜ್ಯದಾದ್ಯಂತ 32 ಕ್ರೀಡಾ ವಸತಿ ನಿಲಯ ಹಾಗೂ 02 ಕ್ರೀಡಾ ವಸತಿ ಶಾಲೆಗಳಿದ್ದು, ಈ ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿ ಪ್ರವೇಶ ಪಡೆಯುವ ಪ್ರತಿಭಾವಂತ ಯುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ತರಬೇತಿ ಮತ್ತು ಕ್ರೀಡಾ ಸಮವಸ್ತ್ರ ಒದಗಿಸಲಾಗುತ್ತಿದೆ. ದೈಹಿಕ ಕ್ಷಮತಾ ಪರೀಕ್ಷೆಗಳಲ್ಲಿ ಹಾಗೂ ಕ್ರೀಡಾ ಕೌಶಲ್ಯ ಪರೀಕ್ಷೆ ಆಧಾರಿತವಾಗಿ 5ನೇ ತರಗತಿ ಮೇಲ್ಪಟ್ಟ ಕ್ರೀಡಾಪಟುಗಳಿಗೆ ಆಯ್ಕೆ ಪ್ರಕ್ರಿಯೆ ನಡೆಸಿ, ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.
2. **'ಗುರಿ ಒಲಿಂಪಿಕ್ ಪದಕ' ಕಾರ್ಯಕ್ರಮ:** ರಾಜ್ಯದ ಅತ್ಯಂತ ಪ್ರತಿಭಾನ್ವಿತ 60 ಕ್ರೀಡಾಪಟುಗಳನ್ನು ಗುರುತಿಸಿ, 2028 ರ ಒಲಿಂಪಿಕ್ಸ್ ತಯಾರಿಗೆ ವಾರ್ಷಿಕ ತಲಾ ರೂ 10.00 ಲಕ್ಷ ಪ್ರೋತ್ಸಾಹ ಧನ ನೀಡಲಾಗುವುದು.
3. **ಕ್ರೀಡಾ ಸಾಧಕರಿಗೆ ನಗದು ಪುರಸ್ಕಾರ:** ರಾಷ್ಟ್ರೀಯ ಮತ್ತು ಅಂತರ-ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ಕೆಳಕಾಣಿಸಿದಂತೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ.

**(ರೂ.ಲಕ್ಷಗಳಲ್ಲಿ)**

| ಕ್ರ.ಸ | ವಿವರ | ಚಿನ್ನ | ಬೆಳ್ಳಿ | ಕಂಚು |
|---|---|---|---|---|
| 1 | ಒಲಂಪಿಕ್ಸ್ | 600.00 | 400.00 | 300.00 |
| 2 | ಏಷಿಯನ್ ಗೇಮ್ಸ್ | 35.00 | 25.00 | 15.00 |
| 3 | ಕಾಮನ್ ವೆಲ್ತ್ ಗೇಮ್ಸ್ | 35.00 | 25.00 | 15.00 |
| 4 | ವಿಶ್ವ ಕಪ್/ಚಾಂಪಿಯನ್ ಶಿಪ್ (ಭಾರತ ಸರ್ಕಾರದಿಂದ ಅಂಗೀಕೃತವಾಗಿ ಭಾರತ ತಂಡದ ಭಾಗವಾಗಿ ಪ್ರತಿನಿಧಿಸಿರಬೇಕು) | 5.00 | 3.00 | 2.00 |
| 5 | ನ್ಯಾಷನಲ್ ಗೇಮ್ಸ್ (ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ಕ್ರೀಡೆಗಳು) | 5.00 | 3.00 | 2.00 |
| 6 | ನ್ಯಾಷನಲ್ ಚಾಂಪಿಯನ್ ಶಿಪ್ (ಒಲಂಪಿಕ್ ಕ್ರೀಡೆಗಳಿಗೆ) | 2.00 | 1.00 | 0.50 |
| 7 | ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.50 | 0.25 | 0.15 |
| 8 | ಸಬ್ ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.25 | 0.15 | 0.10 |

4. **ಪರಿಶಿಷ್ಟ ಜಾತಿ ಮತ್ತು ಪಂಗಡದ ಸಾಧಕ ಕ್ರೀಡಾಪಟುಗಳಿಗೆ ವಿಶೇಷ ನಗದು ಪುರಸ್ಕಾರ:** ಅಂತರ-ರಾಷ್ಟ್ರೀಯ ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಕ್ರೀಡಾಕೂಟಗಳ ಪದಕ ವಿಜೇತರಿಗೆ ವಿಶೇಷ ನಗದು ಪುರಸ್ಕಾರ ಡಲಾಗುತ್ತಿದೆ.

5. **<u>ಕ್ರೀಡಾ ವಿದ್ಯಾರ್ಥಿ ವೇತನ:</u>** ರಾಜ್ಯ ಮಟ್ಟದ ಕ್ರೀಡಾಕೂಟದಲ್ಲಿ ಪದಕ ವಿಜೇತರಾದ ಹಾಗೂ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ರೂ 10,000 ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.
6. **<u>ಶೈಕ್ಷಣಿಕ ಶುಲ್ಕ ಮರುಪಾವತಿ:</u>** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ಪ್ರತಿನಿಧಿಸಿ ಪದಕ ವಿಜೇತರಾದ ಪ್ರಥಮ ಪಿ.ಯು.ಸಿಯಿಂದ ಉನ್ನತ ಶಿಕ್ಷಣ ಮಾಡುತ್ತೀರುವ ಕ್ರೀಡಾಪಟುಗಳಿಗೆ ವಾರ್ಷಿಕ ಗರಿಷ್ಠ ರೂ 50,000/- ವರೆಗೆ ಶೈಕ್ಷಣಿಕ ಶುಲ್ಕ ಮರುಪಾವತಿ ಮಾಡಲಾಗುತ್ತಿದೆ.
7. **<u>ಕ್ರೀಡಾ ಸಾಧಕರಿಗೆ ಪ್ರಶಸ್ತಿಗಳು:</u>**

   **<u>ಅ. ಏಕಲವ್ಯ ಪ್ರಶಸ್ತಿ:</u>** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಪ್ರತಿ ವರ್ಷ ಏಕಲವ್ಯ ಪ್ರಶಸ್ತಿ ನೀಡಲಾಗುತ್ತಿದೆ.

   **<u>ಆ. ಜೀವಮಾನ ಸಾಧನೆ ಪ್ರಶಸ್ತಿ:</u>** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ತರಬೇತಿ ನೀಡಿದ ರಾಜ್ಯದ ತರಬೇತುದಾರರಿಗೆ ಹಾಗೂ ಕ್ರೀಡಾಪಟುಗಳಿಗೆ ಜೀವಮಾನ ಸಾಧನೆಗೆ ಜೀವಮಾನ ಸಾಧನೆ ಪ್ರಶಸ್ತಿಯನ್ನು ಪ್ರತಿ ವರ್ಷ ನೀಡಲಾಗುತ್ತಿದೆ.

   **<u>ಇ. ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ:-</u>** ದೇಸೀ ಗ್ರಾಮೀಣ ಕ್ರೀಡೆಗಳಲ್ಲಿ ವಿಶೇಷ ಸಾಧನೆ ಮಾಡಿದ ರಾಜ್ಯದ ಗ್ರಾಮೀಣ ಕ್ರೀಡಾಪಟುಗಳಿಗೆ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ.

   **<u>ಈ. ಕ್ರೀಡಾ ಪೋಷಕ ಪ್ರಶಸ್ತಿ:</u>** ಕ್ರೀಡೆಯ ಅಭಿವೃದ್ಧಿಗೆ ಗಣನೀಯ ಕೊಡುಗೆ ನೀಡಿದ ಖಾಸಗಿ ಸಂಘ-ಸಂಸ್ಥೆಗಳಿಗೆ ಉತ್ತೇಜನ ನೀಡಲು ಕ್ರೀಡಾ ಪೋಷಕ ಪ್ರಶಸ್ತಿಯನ್ನು ಪ್ರತಿ ವರ್ಷ ನೀಡಲಾಗುತ್ತಿದೆ.

8. **<u>ಕ್ರೀಡಾಕೂಟಗಳ ಆಯೋಜನೆ:</u>** ದಸರಾ ಕ್ರೀಡಾಕೂಟ, ಕರ್ನಾಟಕ ಕ್ರೀಡಾಕೂಟ, ಮಿನಿ ಒಲಂಪಿಕ್ಸ್ (ಕರ್ನಾಟಕ ಒಲಿಂಪಿಕ್ ಸಂಸ್ಥೆಯ ಸಹಯೋಗದೊಂದಿಗೆ) ಮತ್ತಿತರ ಕ್ರೀಡಾಕೂಟಗಳನ್ನು ಆಯೋಜಿಸಲಾಗುತ್ತಿದೆ.
9. **<u>ಕ್ರೀಡಾ ಮೂಲ ಸೌಕರ್ಯಗಳ ಸೃಜನೆ:</u>** ರಾಜ್ಯದಾದ್ಯಂತ ಜಿಲ್ಲಾ/ತಾಲ್ಲೂಕು ಹೊರಾಂಗಣ, ಒಳಾಂಗಣ ಕ್ರೀಡಾಂಗಣಗಳು, ಈಜುಕೊಳಗಳು, ವಿವಿಧ ಕ್ರೀಡಾ ಅಂಕಣಗಳು, ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್, ಸಿಂಥೆಟಿಕ್ ಹಾಕಿ ಟರ್ಫ್ ಮತ್ತು ಫುಟ್‌ಬಾಲ್ ಟರ್ಫ್ ಅಳವಡಿಕೆ ಮತ್ತಿತರ ಸೌಲಭ್ಯಗಳನ್ನು ಸೃಜಿಸಲಾಗುತ್ತಿದೆ.
10. **<u>ಶಾಲಾ ಆಟದ ಮೈದಾನಗಳ ಅಭಿವೃದ್ಧಿ:</u>** 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-403 ರಲ್ಲಿ "ಉದ್ಯೋಗ ಖಾತರಿ ಯೋಜನೆಯೊಂದಿಗೆ ಸಂಯೋಜಿಸಿ 100 ಶಾಲೆಗಳಲ್ಲಿ ಆಟದ ಮೈದಾನ ನಿರ್ಮಿಸಲು ತಲಾ ರೂ 5.00 ಲಕ್ಷದವರೆಗೆ ನೆರವು ನೀಡಲಾಗುವುದು" ಎಂದು ಘೋಷಿಸಲಾಗಿದೆ. ಸದರಿ ಘೋಷಣೆಯನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ದಿನಾಂಕ: 19-06-2025 ರಂದು ಸರ್ಕಾರದ ಆದೇಶವನ್ನು ಹೊರಡಿಸಲಾಗಿದ್ದು, ಉದ್ಯೋಗ ಖಾತರಿ ಯೋಜನೆಯಡಿ ಶಾಲಾ ಆಟದ

ಮೈದಾನವನ್ನು ಅಭಿವೃದ್ಧಿಪಡಿಸಲಾಗುವುದು ಹಾಗೂ ಪ್ರತೀ ಶಾಲೆಗೆ ಗರಿಷ್ಠ ರೂ 5.00 ಲಕ್ಷ ಮಿತಿಯೊಳಗೆ ಕ್ರೀಡಾ ಸಾಮಗ್ರಿ ಒದಗಿಸಲಾಗುವುದು.

11. **ನಮ್ಮೂರ ಶಾಲೆಗೆ ನಮ್ಮ ಯುವಜನರು:** ಅಧಿಕೃತ ಕ್ರೀಡಾಕೂಟಗಳಲ್ಲಿ ಉತ್ತಮ ಸಾಧನೆ ತೋರುವ ಕ್ರೀಡಾಪಟುಗಳನ್ನು ರೂಪಿಸುವ ಸರ್ಕಾರಿ ಶಾಲೆಗಳನ್ನು ಪ್ರತಿ ಜಿಲ್ಲೆಗೆ ಒಂದರಂತೆ ಗುರುತಿಸಿ ಆಯ್ಕೆಯಾದ ಶಾಲೆಗೆ ಪ್ರೋತ್ಸಾಹವಾಗಿ ತಲಾ ರೂ 1.00 ಲಕ್ಷದಂತೆ ಸರ್ಕಾರದಿಂದ ಪ್ರೋತ್ಸಾಹಧನವನ್ನು ನೀಡಲಾಗುವುದು. ಈ ಪ್ರೋತ್ಸಾಹಧನದಲ್ಲಿ ರೂ 10,000 ಗಳನ್ನು ಆಯ್ಕೆಯಾದ ಶಾಲೆಯ ದೈಹಿಕ ಶಿಕ್ಷಕರಿಗೆ ಮತ್ತು ರೂ 90,000 ಗಳನ್ನು ಶಾಲೆಯ ಎಸ್.ಡಿ.ಎಂ.ಸಿ.ಗೆ ಅಗತ್ಯ ಕ್ರೀಡಾ ಸಾಮಾಗ್ರಿಗಳನ್ನು ಒದಗಿಸಲು ನೀಡಲಾಗುವುದು.
12. **ಯುವ ಶಕ್ತಿ ಕೇಂದ್ರ:** ಯುವಜನರ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸಲು ಇಲಾಖಾ ಕ್ರೀಡಾಂಗಣಗಳು, ಕ್ರೀಡಾ ವಸತಿ ನಿಲಯಗಳು ಮತ್ತು ಸರ್ಕಾರಿ ಕಾಲೇಜುಗಳಿಗೆ ಜಿಮ್ ಉಪಕರಣಗಳನ್ನು ಒದಗಿಸಲಾಗುವುದು.
13. **ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಅನುದಾನ**: ಮಾನ್ಯತೆ ಪಡೆದ ರಾಜ್ಯ ಕ್ರೀಡಾ ಸಂಸ್ಥೆಗೆ ಕ್ರೀಡಾಕೂಟಗಳ ಆಯೋಜನೆ, ತರಬೇತಿ ಶಿಬಿರಗಳ ಆಯೋಜನೆ ಹಾಗೂ ಕ್ರೀಡಾಕೂಟಗಳಿಗೆ ರಾಜ್ಯ ತಂಡದ ನಿಯೋಜನೆಗೆ ಅನುದಾನ ನೀಡಲಾಗುತ್ತಿದೆ. 2024-25 ನೇ ಸಾಲಿನಲ್ಲಿ 22 ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಒಟ್ಟು ರೂ 10.00 ಕೋಟಿ ವಿಶೇಷ ಅನುದಾನ ಮಂಜೂರು ಮಾಡಲಾಗಿದೆ.
14. ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿಯ ಮೂಲಕ ಯುವಜನರಿಗೆ ಸಾಹಸ ಕ್ರೀಡಾ ಪ್ರಶಿಕ್ಷಕರಾಗಲು ವಿವಿಧ ಹಂತಗಳ ತರಬೇತಿಯನ್ನು ನೀಡಲಾಗುತ್ತಿದೆ.
15. **ಗರಡಿ ಮನೆ ನಿರ್ಮಾಣ:** ಕುಸ್ತಿ ಕ್ರೀಡಾಪಟುಗಳಿಗೆ ಉತ್ತೇಜನ ನೀಡುವ ಸಲುವಾಗಿ ಗರಡಿ ಮನೆ ನಿರ್ಮಾಣಕ್ಕೆ ತಲಾ ರೂ 10.00 ಲಕ್ಷ ಒದಗಿಸಲಾಗುತ್ತಿದೆ.
16. ಒಲಿಂಪಿಕ್ಸ್ ಪ್ಯಾರಾಲಿಂಪಿಕ್ಸ್, ಏಷಿಯನ್ ಗೇಮ್ಸ್ ಪ್ಯಾರಾ ಏಷಿಯನ್ ಗೇಮ್ಸ್ ಕಾಮನ್ ವೆಲ್ತ್ ಗೇಮ್ಸ್ ಗಳಲ್ಲಿ ಪದಕ ವಿಜೇತ ಸಾಧಕ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರದ ಇಲಾಖೆಗಳಲ್ಲಿ ಗುಂಪು-ಎ ಗುಂಪು-ಬಿ ಮತ್ತು ಇತರೆ ಹುದ್ದೆಗಳಿಗೆ ನೇಮಕಾತಿಗೆ ವಿಶೇಷ ನಿಯಮಗಳನ್ನು ರಚಿಸಲಾಗಿದೆ.